# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 200 |
| ಮಾನ್ಯ ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13-09-2021 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರವಾಸೋದ್ಯಮ ಹಾಗೂ ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ "ಹೆಲಿ ಟ್ಯೂರಿಸಂ' ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆಯೇ; | ಕರ್ನಾಟಕ ಪ್ರವಾಸೋದ್ಯಮ ಇಲಾಖೆಯು ರಾಜ್ಯದ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದ ಪ್ರಮುಖ ಇಲಾಖೆಯಾಗಿದ್ದು, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿನ ಪ್ರವಾಸಿಗರನ್ನು ಕರ್ನಾಟಕದತ್ತ ಸೆಳೆಯಲು ಕರ್ನಾಟಕದಲ್ಲಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಹೆಲಿ ಟೂರಿಸಂ ಅನ್ನು ಅನುಷ್ಠಾನಗೊಳಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಪ್ರಸ್ತುತ ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡಲು ಪ್ರವಾಸಿಗರಿಗೆ ಅನುಕೂಲವಾಗುವಂತೆ ಕರಡು 'ಹೆಲಿ ಟೂರಿಸಂ ಸರ್ಕ್ಯೂಟ್' ಅನ್ನು ಸಿದ್ಧಪಡಿಸಲಾಗುತ್ತಿದ್ದು, ಈ ಕರಡು ಸರ್ಕ್ಯೂಟ್ ನಲ್ಲಿ ಕೊಡಗು ಜಿಲ್ಲೆಯನ್ನು ಸಹ ಸೇರ್ಪಡೆಗೊಳಿಸಲು ಪ್ರಸ್ತಾವನೆ ಇದ್ದು, ಸಮಾಲೋಚಕ ಸೇವೆಯನ್ನು ಪಡೆಯಲು ನಿರ್ವಾಹಕರನ್ನು ಆಯ್ಕೆ ಮಾಡುವ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. |
| ಆ) | ಅನುಷ್ಠಾನಗೊಳಿಸುತ್ತಿದ್ದಲ್ಲಿ, ಜಿಲ್ಲೆಯ ಎಷ್ಟು ಪ್ರವಾಸಿ ತಾಣಗಳನ್ನು 'ಹೆಲಿ ಟ್ಯೂರಿಸಂ' ಯೋಜನೆಯಡಿ ಪರಿಗಣಿಸಲಾಗಿದೆ? (ಜಿಲ್ಲೆಯಲ್ಲಿ ಸದರಿ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ನೀಡಿರುವ ಅನುದಾನದ ವಿವರಗಳು ಹಾಗೂ ಕೈಗೊಂಡಿರುವ ಕಾಮಗಾರಿಗಳ ಸಂಪೂರ್ಣ ವಿವರಗಳನ್ನು ಒದಗಿಸುವುದು) | ಹೆಲಿ ಟೂರಿಸಂ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವ ಪ್ರಸ್ತಾವನೆಯು ಆರಂಭಿಕ ಹಂತದಲ್ಲಿದೆ. |

TOR 172 TDV 2021

(ಆನಂದ್ ಸಿಂಗ್)
ಪ್ರವಾಸೋದ್ಯಮ ಹಾಗೂ
ಪರಿಸರ ಮತ್ತು ಜೀವಿಪರಿಸ್ಥಿತಿ ಸಚಿವರು